3

<u>ಕರ್ನಾಟಕ ವಿಧಾನ ಪರಿಷತ್ತು</u>

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 838 |
| ಸದಸ್ಯರ ಹೆಸರು | : | ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 20-12-2021 |
| ಉತ್ತರಿಸುವ ಸಚಿವರು | : | ಮಾನ್ಯ ಅರಣ್ಯ ಹಾಗೂ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಶಿವಮೊಗ್ಗ ಜಿಲ್ಲೆ ತೀರ್ಥಹಳ್ಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಹೊಸನಗರ ತಾಲ್ಲೂಕು ಕೊಡಚಾದ್ರಿ ಪ್ರವಾಸಿ ತಾಣಕ್ಕೆ ಹೋಗುವ ರಸ್ತೆ ಅಭಿವೃದ್ಧಿ ಪಡಿಸಲು ಅರಣ್ಯ ಇಲಾಖೆಯವರು ಅನುಮತಿ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅರಣ್ಯ ಪ್ರದೇಶವನ್ನು ಅರಣ್ಯೇತರ ಉದ್ದೇಶಕ್ಕಾಗಿ ಉಪಯೋಗಿಸಲು ಅರಣ್ಯ (ಸಂರಕ್ಷಣಾ) ಕಾಯ್ದೆ, 1980ರ ಸೆಕ್ಷನ್ 2ರನ್ವಯ ಮಾನ್ಯ ಪರಿಸರ, ಅರಣ್ಯ ಹಾಗೂ ಹವಾಮಾನ ಬದಲಾವಣೆ ಮಂತ್ರಾಲಯದ ಅನುಮೋದನೆ ಅಗತ್ಯವಿರುತ್ತದೆ. ಹಾಗೆಯೇ ಪ್ರಸ್ತಾಪಿತ ಅರಣ್ಯ ಜಮೀನು ವನ್ಯಜೀವಿ ವಿಭಾಗದ ಮುಖಾಂತರ ಹಾದುಹೋಗುತ್ತಿದ್ದರೆ ವನ್ಯಜೀವಿ ಸಂರಕ್ಷಣಾ ಕಾಯ್ದೆ 1972 ರ ಸೆಕ್ಷನ್ 29/35(6) ರನ್ವಯ ರಾಜ್ಯ ವನ್ಯಜೀವಿ ಮಂಡಳಿ ಹಾಗೂ ರಾಷ್ಟ್ರೀಯ ವನ್ಯಜೀವಿ ಮಂಡಳಿಯ ಪೂರ್ವಾನುಮತಿ ಪಡೆಯುವುದು ಕಡ್ಡಾಯವಾಗಿರುತ್ತದೆ. ಉಪಯೋಗಿ ಸಂಸ್ಥೆಯು ಮಾನ್ಯ ಪರಿಸರ, ಅರಣ್ಯ ಹಾಗೂ ಹವಾಮಾನ ಬದಲಾವಣೆ ಮಂತ್ರಾಲಯವು ನಿಗದಿಪಡಿಸಿದ ವೆಬ್ ಪೋರ್ಟಲ್ www.parivesh.nic.inನ ಮೂಲಕ ಅರ್ಜಿ ಸಲ್ಲಿಸಬೇಕಾಗುತ್ತದೆ.<br>ಉಪಯೋಗಿ ಸಂಸ್ಥೆಯಾದ ಕರ್ನಾಟಕ ರಾಜ್ಯ ರಸ್ತೆ ಅಭಿವೃದ್ಧಿ ನಿಗಮ ನಿಯಮಿತವು (KRDCL) ದಿನಾಂಕ: 05-11-2019ರಂದು ಅರ್ಜಿ ಸಲ್ಲಿಸಿರುವ ಮೇರೆಗೆ ಪರಿಶೀಲಿಸಿ ಮಾನ್ಯ ಪರಿಸರ, ಅರಣ್ಯ ಹಾಗೂ ಹವಾಮಾನ ಬದಲಾವಣೆ ಮಂತ್ರಾಲಯ ಹಾಗೂ ರಾಷ್ಟ್ರೀಯ ವನ್ಯಜೀವಿ ಮಂಡಳಿಗೆ ಪೂರ್ವಾನುಮತಿ ನೀಡುವಂತೆ ಕೋರಿ ಕ್ರಮವಾಗಿ ದಿನಾಂಕ:03.07.2021 ಹಾಗೂ ದಿನಾಂಕ:16.04.2021 ರಂದು ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ.<br>ಮಾನ್ಯ ಪರಿಸರ, ಅರಣ್ಯ ಹಾಗೂ ಹವಾಮಾನ ಬದಲಾವಣೆ ಮಂತ್ರಾಲಯವು ದಿನಾಂಕ:09.09.2021 ರಂದು ಹಾಗೂ ರಾಷ್ಟ್ರೀಯ ವನ್ಯಜೀವಿ ಮಂಡಳಿಯು ದಿನಾಂಕ:24.05.2021 ಮತ್ತು ದಿನಾಂಕ:18.09.2021 ರ ಪತ್ರಗಳಲ್ಲಿ ಸ್ಪಷ್ಟೀಕರಣ / ಹೆಚ್ಚುವರಿ ಮಾಹಿತಿಯನ್ನು ಕೋರಿರುತ್ತದೆ.<br>ಮಾನ್ಯ ಪರಿಸರ, ಅರಣ್ಯ ಹಾಗೂ ಹವಾಮಾನ ಬದಲಾವಣೆ ಮಂತ್ರಾಲಯವು ಕೋರಿರುವ ಹೆಚ್ಚುವರಿ ಮಾಹಿತಿಯನ್ನು ಉಪಯೋಗಿ ಸಂಸ್ಥೆಯು ಆನ್‌ಲೈನ್ (ಹಾಗೂ ಹಾರ್ಡ್ ಕಾಪಿ) ಮೂಲಕ ಸಲ್ಲಿಸಿದ ನಂತರ ಇಲಾಖೆಯ ಕ್ಷೇತ್ರ ಅಧಿಕಾರಿಗಳು, ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಸಂರಕ್ಷಣೆ) ಹಾಗೂ ನೋಡಲ್ ಅಧಿಕಾರಿ ಇವರುಗಳು ಪರಿಶೀಲಿಸಿ ಸಲ್ಲಿಸಿದ ತರುವಾಯ ಕೇಂದ್ರ ಸರ್ಕಾರದ ಅನುಮೋದನೆಗೆ ಸಲ್ಲಿಸಲಾಗುವುದು. ಪ್ರಸ್ತುತ ಕೇಂದ್ರ ಸರ್ಕಾರವು ಕೋರಿರುವ ಹೆಚ್ಚುವರಿ ಮಾಹಿತಿಯನ್ನು ಉಪಯೋಗಿ ಸಂಸ್ಥೆಯು ಸಲ್ಲಿಸಿರುವುದಿಲ್ಲ. |
| ಇ) | ಈ ರಸ್ತೆ ಅಭಿವೃದ್ಧಿಗೆ ಅನುದಾನವಿದ್ದರೂ, ಅರಣ್ಯ ಇಲಾಖೆಯವರು ಅನುಮತಿ ನೀಡದಿರಲು ಕಾರಣಗಳು ಹಾಗೂ ಈ ರಸ್ತೆ ಅಭಿವೃದ್ಧಿ ಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು) | |
| ಆ) | ಈ ಪ್ರವಾಸಿ ತಾಣಕ್ಕೆ ಹೋಗುವ ಪ್ರವಾಸಿಗರು ರಸ್ತೆ ದುರಸ್ಥಿಯಲ್ಲಿರುವುದರಿಂದ ಅನೇಕ ತೊಂದರೆಗಳನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ; | ಅರಣ್ಯ ಇಲಾಖೆಯಲ್ಲಿ ವರದಿಯಾಗಿರುವುದಿಲ್ಲ. |

ಸಂಖ್ಯೆ: ಅಪಜೀ 97 ಎಫ್‌ಎಲ್‌ಎಲ್ 2021

(ಉಮೇಶ್ ವಿ. ಕತ್ತಿ)
ಅರಣ್ಯ ಹಾಗೂ ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು.